ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 25–3–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಮಾಜಿ ವಿಧಾನ ಸಭಾಧ್ಯಕ್ಷರಾದ ಶ್ರೀ ಬಿ. ಜಿ. ಬಣಕಾರ ಮತ್ತು ದಿವಂಗತ ಶಾಸಕ ಚಂದ್ರಶೇಖರ ಪಾಟೀಲ್ ಮಹಾಗಾಂವ್‌ರವರ ಕುರಿತ ಪುಸ್ತಕಗಳ ಬಿಡುಗಡೆ.<br><br>ಪುಸ್ತಕಗಳ ಬಿಡುಗಡೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು<br><br>ಅಧ್ಯಕ್ಷತೆ:<br><br>ಶ್ರೀ ಡಿ. ಹೆಚ್. ಶಂಕರಮೂರ್ತಿ,<br>ಸಭಾಪತಿಗಳು,<br>ಕರ್ನಾಟಕ ವಿಧಾನ ಪರಿಷತ್ತು.<br><br>ಸಮಾರಂಭದ ಉದ್ಘಾಟನೆ:<br><br>ಶ್ರೀ ಕಾಗೋಡು ತಿಮ್ಮಪ್ಪ,<br>ಸಭಾಧ್ಯಕ್ಷರು,<br>ಕರ್ನಾಟಕ ವಿಧಾನ ಸಭೆ<br><br>ಮುಖ್ಯ ಅತಿಥಿಗಳು:<br><br>ಶ್ರೀ ಜಗದೀಶ್ ಶೆಟ್ಟರ್,<br>ಮಾಜಿ ಮುಖ್ಯಮಂತ್ರಿಗಳು ಹಾಗೂ<br>ವಿರೋಧ ಪಕ್ಷದ ನಾಯಕರು.<br><br>ಶ್ರೀ ಹೆಚ್. ಡಿ. ಕುಮಾರಸ್ವಾಮಿ, | 26–03–2015<br>ಗುರುವಾರ<br>ಸಂಜೆ<br>5–30 ಗಂಟೆಗೆ | ಸಮ್ಮೇಳನ ಸಭಾಂಗಣ,<br>ಕೊಠಡಿ ಸಂಖ್ಯೆ 419,<br>ನಾಲ್ಕನೇ ಮಹಡಿ,<br>ವಿಕಾಸಸೌಧ, ಬೆಂಗಳೂರು. |

| | | | |
|---|---|---|---|
| | ಮಾಜಿ ಮುಖ್ಯಮಂತ್ರಿಗಳು,<br><br>ಶ್ರೀ ಕೆ. ಎಸ್. ಈಶ್ವರಪ್ಪ,<br>ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರು. | | |

**ನಿರ್ದೇಶಕರ ಪರವಾಗಿ**

# ಪತ್ರಿಕಾ ಪ್ರಕಟಣೆ

## ಧರ್ಮ ಒಂದು ಜೀವನ ಮಾರ್ಗ – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ಧರ್ಮ ಎನ್ನುವುದು ಒಂದು ಜೀವನ ಮಾರ್ಗವಾಗಿದೆ, ಧರ್ಮ ಇರುವುದು ನಮಗೆ, ಜನರ ಸಲುವಾಗಿ, ಸಮಾಜ ಸಲುವಾಗಿ ಹೊರತು ಧರ್ಮಕ್ಕಾಗಿ ಜನ, ಸಮಾಜ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಜಯಂತಿ ಉತ್ಸವ ಸಂದರ್ಭದಲ್ಲಿ ಮಾತನಾಡುತ್ತಿದ್ದರು.

ನೇಕಾರ ಜನರಿಗೆ ಮಾತ್ರ ದೇವರದಾಸಿಮಯನವರು ಪೂಜ್ಯರಲ್ಲ ಅವರು ಆದ್ಯ ವಚನಕಾರರಾಗಿದ್ದರು. ಅವರ ವಚನಗಳ ಮೂಲಕ ಜನರಿಗೆ ಸರಳವಾದ ಭಾಷೆಯಲ್ಲಿ ಅರ್ಥವಾಗುವಂತೆ ಸರಳ ಜೀವನ ನಿರ್ವಹಣೆ ತಿಳಿಸಿ ಹೇಳುತ್ತಿದ್ದರು ಎಂದು ಮುಖ್ಯಮಂತ್ರಿಗಳು ತಮ್ಮ ಭಾವನಾತ್ಮಕ ಭಾಷಣದಲ್ಲಿ ತಿಳಿಸಿದರು.

ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಖಾತೆಯ ಸಚಿವ ಶ್ರೀ ಹೆಚ್. ಆಂಜನೇಯ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆಯ ಸಚಿವೆ ಶ್ರೀಮತಿ ಉಮಾಶ್ರೀ ಶಾಸಕರಾದ ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ, ಕೆ.ಸಿ. ಕೊಂಡಯ್ಯ ಸೇರಿದಂತೆ ಹಲವು ಗಣ್ಯರು ಹಾಜರಿದ್ದರು. ಜ್ಞಾನಪೀಠ ಪ್ರಶಸ್ತಿ ವಿಜೇತ ಶ್ರೀ ಚಂದ್ರಶೇಖರ ಕಂಬಾರ ಅವರು ಉಪಸ್ಥಿತರಿದ್ದರು.

ಬಾಬು:ಜಿಪಿಆರ್.

ವಿಧಾನ ಮಂಡಲದ ಸುದ್ದಿಗಳು:

## ಮಂಗಳೂರಿನಲ್ಲಿ ಹಜ್ ಭವನ ನಿರ್ಮಾಣ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ಮಂಗಳೂರಿನ ಬಜ್ಪೆಯಲ್ಲಿ ಹಜ್ ಭವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ವಿಧಾನಸಭೆಯಲ್ಲಿ ಮಂಗಳೂರು ನಗರ ಶಾಸಕ ಶ್ರೀ ಮೊಹಿಯುದ್ದಿನ್ ಬಾವಾ ಬಿ.ಎ. ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಮಂಗಳೂರಿನ ಹಜ್ ಭವನ ನಿರ್ಮಾಣಕ್ಕಾಗಿ ಮಂಗಳೂರು ತಾಲ್ಲೂಕು, ಕೆಂಜಾರು ಗ್ರಾಮದಲ್ಲಿ ಸ>ನಂ 99–2ಎ1 ರ ಪೈಕಿ ವಿಸ್ತೀರ್ಣ 1.66 ಎಕರೆ ಹಾಗೂ ಇದೇ ಸಂ. ನಂ. ನಲ್ಲಿ 0.40 ಎಕರೆ ಜಮೀನನನ್ನು ಕಾಯ್ದಿರಿಸಿದ್ದು, ಈ ಜಮೀನಿನ ಪೈಕಿ ಸ.ನಂ. 99/2ಎ1 ರ 0.40 ಎಕರೆ ಜಮೀನನ್ನು ಪ್ರಸ್ತುತ ರಾಜ್ಯ ಹೆದ್ದಾರಿ 67 ರಿಂದ ಮಂಗಳೂರು ವಿಮಾನ ನಿಲ್ದಾಣ ಹೊಸ ಟರ್ಮಿನಲ್ ಕಟ್ಟಡಕ್ಕೆ ಹೆಚ್ಚುವರಿ ರಸ್ತೆಯನ್ನು ಅಭಿವೃದ್ಧಿಗೊಳಿಸುವ ಉದ್ದೇಶಕ್ಕೆ ತಯಾರಿಸಲಾಗಿರುವ ಯೋಜನೆಯಲ್ಲಿ ಒಳಗೊಂಡಿರುವ ಈ ಜಮೀನನ್ನು ಹಿಂದಕ್ಕೆ ಪಡೆದು ಕೆ.ಆರ್.ಡಿ.ಸಿ.ಎಲ್. ಇವರಿಗೆ ಹಸ್ತಾಂತರಿಸುವ ಕ್ರಮವು ನಡೆದಿದ್ದು, ಇದರ ಬದಲಿಗೆ ಬೇರೆ ಜಮೀನನ್ನು ನೀಡಲಾಗುವುದೆಂದು ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಯವರು ತಿಳಿಸಿರುತ್ತಾರೆ. ಸದರಿ ಜಮೀನು ಸರ್ಕಾರಕ್ಕೆ ನೀಡಿದ ನಂತರ ಹಜ್ ಘರ್ ನಿರ್ಮಾಣದ ಕಾರ್ಯ ಪ್ರಾರಂಭವಾಗಲಿದೆ ಎಂದು ಸಚಿವರು ತಮ್ಮಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಶಾಸಕರ ಫೋಟೋ ಅಳವಡಿಕೆಗೆ ಅವಕಾಶವಿಲ್ಲ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ತಾಲ್ಲೂಕು ಕಚೇರಿ, ಶಿಕ್ಷಣಾಧಿಕಾರಿಗಳ ಕಚೇರಿ ಸೇರಿದಂತೆ ಸರ್ಕಾರಿ ಕಚೇರಿಗಳ ಎದುರು ಅಳವಡಿಸಲಾಗಿರುವ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಪಟ್ಟ ಪ್ಲೆಕ್ಸ್‌ಗಳಲ್ಲಿ ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಸಚಿವರ ಫೋಟೋಗಳನ್ನು ಹಾಕಲಾಗಿದೆ. ಈ ಪ್ಲೆಕ್ಸ್‌ಗಳಲ್ಲಿ ಸ್ಥಳೀಯ ಶಾಸಕರ ಫೋಟೋ ಅಳವಡಿಸಲು ಅವಕಾಶವಿರುವುದಿಲ್ಲ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು

ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ವಿಧಾನಸಭೆಯಲ್ಲಿ ಮುಳಬಾಗಿಲು ಶಾಸಕ ಶ್ರೀ ಜಿ. ಮಂಜುನಾಥ್ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## 12 ನೋಂದಾಯಿತ ಫಿಲಂ ಸೊಸೈಟಿಗಳು

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಫಿಲಂ ಸೊಸೈಟಿಗಳು ಸಹಕಾರ ಇಲಾಖೆಯಲ್ಲಿ ನೋಂದಾಯಿಸಲ್ಪಡುತ್ತವೆ. ವಾರ್ತಾ ಇಲಾಖೆಯಲ್ಲಿ ಲಭ್ಯವಿರುವ ಮಾಹಿತಿ ಪ್ರಕಾರ 12 ಫಿಲಂ ಸೊಸೈಟಿಗಳು ಕಾರ್ಯಚಟುವಟಿಕೆಗಳನ್ನು ನಡೆಸುತ್ತಿವೆ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ವಿಧಾನಸಭೆಯಲ್ಲಿ ಮಂಗಳೂರು ನಗರ ಶಾಸಕ ಶ್ರೀ ಮೊಹಿಯುದ್ದಿನ್ ಬಾವಾ ಬಿ.ಎ. ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಕಲಾತ್ಮಕ ಚಿತ್ರಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸದಭಿರುಚಿಯ ಫಿಲಂ ಸೊಸೈಟಿಗಳಿಗೆ ಆರ್ಥಿಕ ನೆರವು ನೀಡುವ ಯಾವುದೇ ನಿರ್ಧಿಷ್ಟ ಪ್ರಸ್ತಾವನೆ ಮುಂದಿರುವುದಿಲ್ಲ. ಕರ್ನಾಟಕ ಚಲನಚಿತ್ರ ಅಕಾಡೆಮಿಯಿಂದ ಕಲಾತ್ಮಕ ಚಿತ್ರಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸದಭಿರುಚಿಯ ಚಲನಚಿತ್ರಗಳನ್ನು ಪ್ರದರ್ಶಿಸುವ ಮತ್ತು ವಿಚಾರಸಂಕಿರಣ ಏರ್ಪಡಿಸುವ ಫಿಲಂ ಸೊಸೈಟಿಗಳಿಗೆ ಆಯಾಯಾ ಸಂದರ್ಭಕ್ಕೆ ಅನುಗುಣವಾಗಿ ಪೂರಕ ಆರ್ಥಿಕ ನೆರವು ಒದಗಿಸುತ್ತಿದೆ. ರಾಜ್ಯ ಚಲನಚಿತ್ರ ಅಕಾಡೆಮಿಯು ರಾಜ್ಯಾದ್ಯಂತ ಸ್ಥಾಪಿಸಿರುವ ಬೆಳ್ಳಿ ಮಂಡಲ ಘಟಕಗಳಿಗೆ (ಫಿಲಂ ಸೊಸೈಟಿ , ಫಿಲಂ ಕ್ಲಬ್) ಪ್ರತಿ ತಿಂಗಳು ಇಂದು ಕಾರ್ಯಕ್ರಮಕ್ಕೆ ರೂ 5000/- ಮೀರದಂತೆ ಧನಸಹಾಯ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಬಾಬು:ಜಿಪಿಆರ್.

## ವಾರ್ತಾ ಇಲಾಖೆಯಿಂದ ಜಾಹೀರಾತಿಗಾಗಿ 19.24 ಕೋಟಿ ರೂ. ವೆಚ್ಚ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು ತನ್ನ ಸಾಧನೆಗಳ ಬಗ್ಗೆ ಪತ್ರಿಕೆಗಳಿಗೆ ನೀಡಿರುವ ಜಾಹೀರಾತುಗಳ ಸಂಖ್ಯೆ 2012-13 ರಲ್ಲಿ 40 2013-14 ರಲ್ಲಿ 25 ಜಾಹೀರಾತುಗಳನ್ನು ಪತ್ರಿಕೆಗಳಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೂಲಕ ಬಿಡುಗಡೆಮಾಡಲಾಗಿದೆ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ವಿಧಾನಸಭೆಯಲ್ಲಿ ಮಂಗಳೂರು ನಗರ ಶಾಸಕ ಶ್ರೀ ಮೊಹಿಯುದ್ದಿನ್ ಬಾವಾ ಬಿ.ಎ. ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಈ ಜಾಹೀರಾತರುಗಳನ್ನು ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ರಾಜ್ಯ ಮಟ್ಟದ 14 ದಿನ ಪತ್ರಿಕೆಗಳಿಗೆ, 32 ಪ್ರದೇಶಿಕ ದಿನ ಪತ್ರಿಕೆಗಳಿಗೆ, 284 ಜಿಲ್ಲಾ ಮಟ್ಟದ ದಿನ ಪತ್ರಿಕೆಗಳು, 11 ಟಿ.ವಿ. ವಾಹಿನಿಗಳಿಗೆ ಮತ್ತು 7 ರೇಡಿಯೋ ವಾಹಿನಿಗಳಿಗೆ ಬಿಡುಗಡೆ ಮಾಡಲಾಗಿದೆ.

2014-15 ನೇ ಸಾಲಿನಲ್ಲಿ ಇಲ್ಲಿಯವರೆಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಜಾಹೀರಾತಿಗಾಗಿ ಖರ್ಚು ಮಾಡಿದ ಹಣ ರೂ 19.24 ಕೋಟಿ.

ಇಲಾಖಾವಾರು ಮತ್ತು ಕ್ಷೇತ್ರವಾರು ಆಧಾರದಲ್ಲಿ ಹಣವನ್ನು ಬಿಡುಗಡೆ ಮಾಡುವುದಿಲ್ಲವಾದ್ದರಿಂದ ಈ ವೆಚ್ಚ ಬಗ್ಗೆ ವಾರ್ತಾ ಇಲಾಖೆಯಲ್ಲಿ ಮಾಹಿತಿ ಇರುವುದಿಲ್ಲ ಎಂದು ಸಚಿವರು ತಮ್ಮ ಲಿಖಿತ ಉತ್ತರದಲ್ಲಿ ತಿಳಿಸಿದರು.

ಬಾಬು:ಜಿಪಿಆರ್.

## 2014 ರಲ್ಲಿ 5382 ಹಜ್ ಯಾತ್ರಾರ್ಥಿಗಳು

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ 2014 ನೇ ಸಾಲಿನಲ್ಲಿ 5382 ಯಾತ್ರಾರ್ಥಿಗಳು ಹಜ್ ಯಾತ್ರೆಗೆ ತೆರಳಿದ್ದಾರೆ. 2015 ನೇ ಸಾಲಿನ ಹಜ್ ಯಾತ್ರೆಗೆ ತೆರಳಿರುವ ಯಾತ್ರಾರ್ಥಿಗಳ ಆಯ್ಕೆಯು ಇನ್ನು ಅಂತಿಮ ಗೊಂಡಿರುವುದಿಲ್ಲ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ವಿಧಾನಸಭೆಯಲ್ಲಿ ಬೀಳಗಿ ಶಾಸಕ ಶ್ರೀ ಜೆ. ಟಿ. ಪಾಟೀಲ್ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

2010 ರಲ್ಲಿ 7342 ಹಜ್ ಯಾತ್ರಾರ್ಥಿಗಳು, 2011 ರಲ್ಲಿ 7335, 2012 ರಲ್ಲಿ 6952 ಹಾಗೂ 2013 ರಲ್ಲಿ 6894 ಯಾತ್ರಾರ್ಥಿಗಳು ಕರ್ನಾಟಕ ರಾಜ್ಯದಿಂದ ಹಜ್ ಯಾತ್ರೆಗೆ ತೆರಳಿದ್ದರು ಎಂದು ಸಚಿವರು ತಿಳಿಸಿದರು.

ಬಾಬು:ಜಿಪಿಆರ್.

## ಜನತಾ ಥಿಯೇಟರ್ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

2014-15 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ ಜನತಾ ಥಿಯೇಟರ್ ಯೋಜನೆಯು ಜಾರಿಗೆ ಬಂದಿರುವುದಿಲ್ಲ. ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ ಹಾಗೂ ಅನುದಾನವನ್ನು ಮೀಸಲಿಟ್ಟಿರುವುದಿಲ್ಲ ಎಂದು ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು

ಇಂದು ವಿಧಾನಸಭೆಯಲ್ಲಿ ನವಲಗುಂದ ಶಾಸಕ ಶ್ರೀ ಎನ್. ಹೆಚ್. ಕೋನರೆಡ್ಡಿ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಕನ್ನಡ ಚಲನಚಿತ್ರ ಪ್ರದರ್ಶನಕ್ಕೆ ಅನುಕೂಲವಾಗುವಂತೆ ಜಿಲ್ಲೆ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಜನ ಚಿತ್ರ ಮಂದಿರಗಳನ್ನು ನಿರ್ಮಿಸಲು ಮುಂದೆ ಬರುವ ಆಸಕ್ತ ಉದ್ಯಮಿಗಳಿಗೆ ಸರ್ಕಾರದಿಂದ ಉತ್ತೇಜನ ಹಾಗೂ ಪ್ರೋತ್ಸಾಹ ಧನವನ್ನು ನೀಡಲಾಗುವುದು ಎಂದು 2014–15 ನೇ ಆಯವ್ಯಯದಲ್ಲಿ ಹೇಳಲಾಗಿದೆ ಎಂದು ಅವರು ಲಿಖಿತ ಉತ್ತರದಲ್ಲಿ ತಿಳಿಸಿದರು.

ಬಾಬು:ಜಿಪಿಆರ್.

## ಸರ್ಕಾರಿ ಭೂಮಿ ದುರ್ಬಳಕೆ : ಹಿಂಪಡೆಯಲು ಸೂಚನೆ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ಸಂಘ ಸಂಸ್ಥೆಗಳು, ಮಠ ಮಾನ್ಯಗಳಿಗೆ ಗುತ್ತಿಗೆ ಆಧಾರದಲ್ಲಿ ನೀಡಿರುವ ಸರ್ಕಾರಿ ಭೂಮಿಯನ್ನು ಉದ್ದೇಶಕ್ಕೆ ಬಳಸದೆ ದುರ್ಬಳಕೆ ಮಾಡಿಕೊಂಡಿರುವ ಭೂಮಿಗಳನ್ನು ಹಿಂದಕ್ಕೆ ಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸ್ ಪ್ರಸಾದ್ ಹೇಳಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಸಯದ್ ಮುಧೀರ್ ಆಗಾ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಸಾರ್ವಜನಿಕ ಉದ್ದೇಶಕ್ಕಾಗಿ ಭೂಮಿಯನ್ನು ಮಂಜೂರು ಮಾಡಿಸಿಕೊಂಡು ಬೇರೆ ಉದ್ದೇಶಕ್ಕೆ ಭೂಮಿಯನ್ನು ಬಳಸಿಕೊಂಡಿದ್ದರೆ ನಮ್ಮ ಸರ್ಕಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಿದೆ ಎಂದರು.

ಸಾರ್ವಜನಿಕರ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಕೆಲವು ಸಂಘ ಸಂಸ್ಥೆಗಳು ಮತ್ತು ಮಠಗಳಿಗೆ ಸಚಿವ ಸಂಪುಟದ ಅನುಮೋದನೆ ಪಡೆದು 10 ವರ್ಷಗಳಿಗೆ ಗುತ್ತಿಗೆ ಆಧಾರದಲ್ಲಿ ಸರ್ಕಾರಿ ಜಮೀನನ್ನು ನೀಡಲಾಗುತ್ತಿದೆ. ಯಾವ ಉದ್ದೇಶಕ್ಕಾಗಿ ಭೂಮಿಯನ್ನು ಮಂಜೂರು ಮಾಡಲಾಗಿತ್ತೋ ಆ ಉದ್ದೇಶಕ್ಕೆ ಭೂಮಿಯನ್ನು ಬಳಸಿಕೊಳ್ಳಲಾಗಿದೆಯೇ ಅಥವಾ ಸರ್ಕಾರಕ್ಕೆ ವಂಚಿಸಿದ್ದಾರೆಯೋ ಎಂಬುದನ್ನು ಪರಿಶೀಲಿಸುವಂತೆ, ಅವರ ಮೇಲೆ ಕಾನೂನಿನಡಿ ಶಿಸ್ತುಕ್ರಮ ಕೈಗೊಳ್ಳಲಾಗುವುದೆಂದು ಸಚಿವರು ತಿಳಿಸಿದರು.

ಬಾಬುಪೂರ್ಣಿಮ:ಜಿಪಿಆರ್.

## ಬರ ಪೀಡಿತ 35 ತಾಲ್ಲೂಕಿಗೆ 188 ಕೋಟಿ ರೂ. ಬಿಡುಗಡೆ

ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)

ರಾಜ್ಯದ ಬರ ಪೀಡಿತ 35 ತಾಲ್ಲೂಕಿಗೆ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ 188 ಕೋಟಿ ರು. ಬಿಡುಗಡೆ ಮಾಡಲಾಗಿದೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸ ಪ್ರಸಾದ್ ತಿಳಿಸಿದ್ದಾರೆ.

**ವಿಧಾನ ಪರಿಷತ್ತಿನ ಸದಸ್ಯ ಆರ್. ಚೌಡರೆಡ್ಡಿ ತೂಪಲ್ಲಿ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಸಚಿವರು 2014-15 ನೇ ಸಾಲಿನಲ್ಲಿ 9 ಜಿಲ್ಲೆಗಳ 35 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಈ ಬರಪೀಡಿತ ತಾಲ್ಲೂಕುಗಳಲ್ಲಿ ಬರ ಪರಿಹಾರ ಕಾರ್ಯಗಳಿಗೆ 779.29 ಕೋಟಿ ರೂ. ಅನುದಾನ ಕೋರಿ, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಎನ್.ಡಿ.ಆರ್.ಎಫ್. ಅಡಿ ಕೇಂದ್ರ ಸರ್ಕಾರವು 188 ಕೋಟಿ ರೂ. ಬಿಡುಗಡೆಮಾಡಿರುವ ಹಿನ್ನೆಲೆಯಲ್ಲಿ ಒಂಬತ್ತು ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಕೂಡಲೇ ಹಣ ಬಿಡುಗಡೆ ಮಾಡಲಾಗುವುದೆಂದು ತಿಳಿಸಿದ್ದಾರೆ.**

**ಈ ಅನುದಾನದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು, ಪೈಪ್‌ಲೈನ್ ವಿಸ್ತರಣೆ, ಕೊಳವೆ ಬಾಬಿ ಪುನಶ್ಚೇತನ, ಮೋಟರ್ ಪಂಪು ದುರಸ್ಥಿ, ಜಾನುವಾರುಗಳ ಸಂರಕ್ಷಣೆಗಾಗಿ ಗೋ-ಶಾಲೆಗಳ ಸ್ಥಾಪನೆ ಹಾಗೂ ಮೇವಿನ ಕೊರತೆಯನ್ನು ನೀಗಿಸಲು ಮೇವಿನ ಬೀಜದ ಮಿನಿ ಕಿಟ್‌ಗಳನ್ನು ರೈತರಿಗೆ ಉಚಿತವಾಗಿ ವಿತರಿಸುವ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ**

**ಬಾಬುಪೂರ್ಣಿಮ:ಜಿಪಿಆರ್.**

# ಕಂದಾಯ ಗ್ರಾಮವಾಗಿ 75 ತಾಂಡಾ ಪರಿವರ್ತನೆ

**ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)**

ರಾಜ್ಯಾದ್ಯಂತ ಒಟ್ಟು 75 ತಾಂಡಾಗಳನ್ನು ಕಂದಾಯಗ್ರಾಮಗಳಾಗಿ ಪರಿವರ್ತನೆ ಮಾಡಲು ಸರ್ಕಾರ ಗುರಿ ಹೊಂದಿದೆ ಎಂದು ಕಂದಾಯ ಸಚಿವರ ವಿ. ಶ್ರೀನಿವಾಸ ಪ್ರಸಾದ್ ವಿಧಾನ ವಿಧಾನ ಪರಿಷತ್ತಿನಲ್ಲಿಂದು ಸ್ಪಷ್ಟಪಡಿಸಿದರು.

ಚುನಾವಣಾ ಪ್ರಣಾಳಿಕೆಯಲ್ಲಿಯೇ ನಮ್ಮ ಸರ್ಕಾರವು ತಾಂಡಾ, ಗೊಲ್ಲರಹಟ್ಟಿ ಹಾಗೂ ಇತರ ಹ್ಯಾಮ್ಲೆಟ್‌ಗಳನ್ನು ಕಂದಾಯ ಗ್ರಾಮಗಳಾಗಿ ಮಾಡಲಾಗುವುದೆಂದು ಘೋಷಿಸಲಾಗಿತ್ತು. ಅದರಂತೆ ನಮ್ಮ ಸರ್ಕಾರವು ಅಧಿಕಾರಕ್ಕೆ ಬಂದ ನಂತರವೇ ಇದಕ್ಕೆ ಚಾಲನೆ ನೀಡಲಾಗಿದೆ ಎಂದು ಸದಸ್ಯ ಎನ್. ಎಸ್. ಬೋಸರಾಜು ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

50 ಹಾಗೂ ಅದಕ್ಕಿಂತ ಹೆಚ್ಚು ಕುಟುಂಬಗಳು ಮತ್ತು 250ಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ತಾಂಡಾಗಳನ್ನು ಕಂದಾಯ ಗ್ರಾಮಗಳೆಂದು ರಚಿಸಲು ಷರತ್ತನ್ನು ವಿಧಿಸಲಾಗಿತ್ತು ಸರ್ಕಾರಿ ಜಮೀನುಗಳಲ್ಲಿ ಇರುವಂತಹ ತಾಂಡಾಗಳ ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸುವಂತೆ ಜಿಲ್ಲಾಧಿಕಾರಿಗಳಿಗೆ ಕೋರಲಾಗಿದೆ. ಸರ್ಕಾರಿ ಜಮೀನಿನಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆ ಮಾಡಲು ಯಾವುದೇ ತೊಡಕು ಉಂಟಾಗುತ್ತಿಲ್ಲ. ಆದರೆ ಅರಣ್ಯ ಪ್ರದೇಶ ಮತ್ತು ಹಿಡುವಳಿದಾರರ ಪ್ರದೇಶಗಳಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಕಾನೂನಿನಲ್ಲಿ ಕೆಲವು ತೊಡಕುಗಳುಂಟಾಗಿದೆ ಕಾನೂನಿಗೆ ಕೆಲವು ತಿದ್ದುಪಡಿಯನ್ನು ತರಬೇಕಿದೆ ಎಂದರು.

ನರಸಿಂಹಯ್ಯ ವರದಿ ಹಾಗೂ ತಾಂಡಾ ಅಭಿವೃದ್ಧಿ ನಿಗಮದ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸುವ ಸಲುವಾಗಿ ಅಧಿಕಾರಿಗಳ ತಂಡವನ್ನು ರಚಿಸಲು ಸರ್ಕಾರ ಉದ್ದೇಶಿಸಿದೆ ಎಂದು ಸಚಿವರು ತಿಳಿಸಿದರು.

**ಬಾಬು/ಪೂರ್ಣಿಮ/ಕೆಎಂ**

# ಬಣಕಾರ್ ಮತ್ತು ಮಹಾಗಾಂವ್ ಪುಸ್ತಕ ಬಿಡುಗಡೆ

**ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನ ಮಂಡಲದ ಗ್ರಂಥಾಲಯ ಸಮಿತಿಯು ಪ್ರತಿಭಾವಂತ ಸಂಸದೀಯ ಪಟುಗಳ ಪುಸ್ತಕ ಮಾಲಿಕೆಯಡಿ ಮಾಜಿ ವಿಧಾನಸಭಾಧ್ಯಕ್ಷ ಶ್ರೀ ಬಿ.ಜಿ. ಬಣಕಾರ್ ಮತ್ತು ದಿವಂಗತ ಶಾಸಕ ಚಂದ್ರಶೇಖರ್ ಪಾಟೀಲ್ ಮಹಾಗಾಂವ್‌ಕರ ಅವರುಗಳ ಕುರಿತ ಪುಸ್ತಕ ಬಿಡುಗಡೆ ಸಮಾರಂಭವು ಮಾರ್ಚ್ 26 ರಂದು ಸಂಜೆ 5–30 ಗಂಟೆಗೆ ಬೆಂಗಳೂರು ವಿಕಾಸಸೌಧದ 4ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 419 ರ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ.

ಸಮಾರಂಭದಲ್ಲಿ ಈ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡುವರು. ಸಭೆಯ ಅಧ್ಯಕ್ಷತೆಯನ್ನು ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಡಿ. ಹೆಚ್. ಶಂಕರಮೂರ್ತಿ ವಹಿಸುವರು. ವಿಧಾನಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಸಮಾರಂಭವನ್ನು ಉದ್ಘಾಟಿಸುವರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ. ಕುಮಾರಸ್ವಾಮಿ, ಜಗದೀಶ್ ಶೆಟ್ಟರ್ ಹಾಗೂ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ ಪಾಲ್ಗೊಳ್ಳುವರು.

ಬಾಬು:ಜಿಪಿಆರ್

# ಟೀಯೆಸ್ಸಾರ್ ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು, ಮಾರ್ಚ್ 25, (ಕರ್ನಾಟಕ ವಾರ್ತೆ)**

2012 ಹಾಗೂ 2013 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ, ಮೊಹರೆ ಹಣಮಂತರಾಯ, ಅಭಿವೃದ್ಧಿ ಹಾಗೂ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ಮಾರ್ಚ್ 27 ರ ಶುಕ್ರವಾರ ಸಂಜೆ 6–00 ಗಂಟೆಗೆ ಬೆಂಗಳೂರು ವಾರ್ತಾ ಸೌಧದ ಸುಲೋಚನಾ ಸಭಾಂಗಣದಲ್ಲಿ ಪ್ರದಾನ ಮಾಡುವ ಸಮಾರಂಭ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದು, ಮೂಲ ಸೌಲಭ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಖಾತೆ ರಾಜ್ಯ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು. ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಲೋಕಸಭಾ ಸದಸ್ಯ ಶ್ರೀ ಪಿ. ಸಿ. ಮೋಹನ್, ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶ ಹಾಗೂ 2012, 2013 ನೇ ಸಾಲಿನ ಪತ್ರಿಕೋದ್ಯಮ ಪ್ರಶಸ್ತಿ ಆಯ್ಕೆ ಸಮಿತಿ ಅಧ್ಯಕ್ಷ ನ್ಯಾಯಮೂರ್ತಿ ಶ್ರೀ ಅರಳಿ ನಾಗರಾಜ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಶ್ರೀ ಎಂ. ಎ. ಪೊನ್ನಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

2012 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿಯು ಶ್ರೀ ಎನ್. ಅರ್ಜುನದೇವ ಅವರಿಗೆ 2013 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿಯು ಶ್ರೀ ಪಿ. ಎಸ್. ಈಶ್ವರ ಭಟ್ (ಈಶ್ವರ ದೈತೋಟ) ಅವರಿಗೆ ಪ್ರದಾನವಾಗಲಿದೆ. 2012 ನೇ ಸಾಲಿನ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ರಾಘವೇಂದ್ರ ಅರವಿಂದರಾವ್ ಜೋಷಿ, 2013 ನೇ ಸಾಲಿನ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಕೆ.ಬಿ. ಗಣಪತಿ, 2012 ನೇ ಸಾಲಿನ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಅಂಶಿ ಪ್ರಸನ್ನಕುಮಾರ್, 2013 ನೇ ಸಾಲಿನ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಸದಾನಂದ ಪೆರ್ಲ ಅವರಿಗೆ ಪ್ರದಾನ ಮಾಡಲಾಗುವುದು. 2012 ನೇ ಸಾಲಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಡಾ: ನರೇಂದ್ರ ರೈ, ದೇರ್ಲ ಹಾಗೂ 2013 ನೇ ಸಾಲಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಶ್ರೀ ದೀಪಕ್ ಸಾಗರ ಅವರಿಗೆ ಪ್ರದಾನ ಮಾಡಲಾಗುವುದು.

ಪ್ರಶಸ್ತಿ ವಿಜೇತರಿಗೆ ನಗದು, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು.

ಬಾಬು/ಕೆಎಂ